<u>**1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಹಾನಗಲ್**</u>

<u>**ಸಿ.ಸಿ ನಂ.935/2021**</u>

| | | | | |
|---|---|---|---|---|
| ಸಾಕ್ಷಿದಾರರ ಹೆಸರು | : | ಮಹದೇವ ಯಲಿಗಾರ | ಸಿಡಬ್ಲ್ಯೂ | 12 |
| ತಂದೆ:ಗಂಡನ ಹೆಸರು | : | ಲಕ್ಷ್ಮಣ | ಪಿಡಬ್ಲ್ಯೂ | 11 |
| ವಯಸ್ಸು | : | 51 ವರ್ಷ | | |
| ಉದ್ಯೋಗ | : | ಕೃಷಿ | | |
| ವಾಸ ಸ್ಥಳ | : | ಧಾರವಾಡ | | |

<u>**ದಿನಾಂಕ: 27.03.2026 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**</u>

<u>**ಮುಖ್ಯ ವಿಚಾರಣೆ: ಸಹಾಯಕ ಸರಕಾರಿ ಅಭಿಯೋಜಕರಿಂದ:**</u>

ನಾನು 2015 ಅಗಸ್ಟ ನಿಂದ 2016 ಜುಲೈ ವರೆಗೆ ಆಡೂರು ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣದ ಕಡತವನ್ನು ಚಾಸಾ-11 ರವರಿಂದ ಪಡೆದು ತನಿಖೆಯನ್ನು ಮುಂದುವರೆಸಿ ದಿಃ 30.08.2015 ರಂದು ಚಾಸಾ-1,4,5 ರವರಿಗೆ ಸಂಬಂಧಿಸಿದ ಗಾಯದ ಪ್ರಮಾಣಪತ್ರಗಳನ್ನು ತಾಲೂಕಾ ಆಸ್ಪತ್ರೆ ಹಾನಗಲ ರವರಿಂದ ಸ್ವೀಕರಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ಗಾಯದ ಪ್ರಮಾಣಪತ್ರಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-6 ರಿಂದ 8 ಎಂದು ಗುರುತಿಸಲಾಯಿತು. ಸಾಕ್ಷಿ ಸಹಿಗಳನ್ನು ನಿಪಿ-6 ಎ ರಿಂದ 8 ಎ ಎಂದು ಗುರುತಿಸಲಾಯಿತು. ಆರೋಪಿತರ ವಿರುದ್ಧ ಸಾಕಷ್ಟು ಸಾಕ್ಷ್ಯಾಧಾರಗಳು ದೊರೆಕಿದ್ದರಿಂದ ಅವರ ವಿರುದ್ಧ ಅಂತಿಮ ವರದಿ ಸಲ್ಲಿಸಿರುತ್ತೇನೆ.

<u>**:ಪಾಟೀ ಸವಾಲು: ಆರೋಪಿತರ ಪರ ಶ್ರೀಮತಿ. ವಿ ಬಿ ಬಿ ವಕೀಲರಿಂದ:**</u>

ತಂಟೆದ ಜಮೀನಿಗೆ ಸಂಬಂಧಿಸಿದ ಆರ್ ಟಿ ಸಿಯನ್ನು ನಾನು ನೋಡಿಲ್ಲ. ಆ ಬಗ್ಗೆ ತನಿಖೆ ಮಾಡಲು ನನಗೆ ತೊಂದರೆ ಇರಲಿಲ್ಲ. ಸಾಕ್ಷಿ ಮುಂದುವರೆದು ಸದರಿ ವಿವಾದ ಸಿವಿಲ್

ಸ್ವರೂಪದ್ದು ಎನ್ನುತ್ತಾರೆ. ಘಟನಾ ಸ್ಥಳಕ್ಕೆ ನಾನು ಭೇಟಿ ನೀಡಿಲ್ಲ. ಸದರಿ ಘಟನಾ ಸ್ಥಳದಲ್ಲಿ ಬೆಳೆ ಹಾನಿಯಾದ ಬಗ್ಗೆ ಪೊಟೋಗಳು ಯಾವ ಕಾರಣಕ್ಕಾಗಿ ತೆಗೆದಿಲ್ಲ ಎಂದು ನಾನು ಚಾಸಾ-11 ರವರನ್ನು ವಿಚಾರಿಸಿಲ್ಲ.ನಾನು ಸದರಿ ಪ್ರಕರಣದ ಸರಿಯಾಗಿ ತನಿಖೆ ಮಾಡದೇ ಚಾಸಾ-1 ರವರಿಗೆ ಅನುಕೂಲವಾಗಲಿ ಎಂದು ಸುಳ್ಳು ಅಂತಿಮ ವರದಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ-1,4,5 ರವರ ಗಾಯದಪ್ರಮಾಣಪತ್ರ ಪಡೆದಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರು ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಅವರ ವಿರುದ್ದ ಸುಳು ಅಂತಿಮ ವರದಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

Sd/-

C/C 1 ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು

ಸಾಕ್ಷಿಧಾರರ ಸಹಿ ಮತ್ತು ಜೆ.ಎಂ.ಎಫ್.ಸಿ, ಹಾನಗಲ್